ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1845
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	22-03-2021
ಉತ್ತರಿಸುವ ಸಚಿವರು	:	ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
	(ಬೀದರ್ ಜಿಲ್ಲೆಯ ತಾಲ್ಲೂಕು ಮಟ್ಟಗಳಲ್ಲಿ ಸಾಂಸ್ಕೃತಿಕ ಕಲಾಭವನಗಳ ನಿರ್ಮಾಣ ಕುರಿತು)	
1.	ಕನ್ನಡ ಸಂಘ-ಸಂಸ್ಥೆಗಳು ಮತ್ತು ಕಲಾವಿದರುಗಳು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲು ತಾಲ್ಲೂಕು ಮಟ್ಟದಲ್ಲಿ ಸಾಂಸ್ಕೃತಿಕ ಕಲಾಭವನಗಳನ್ನು ನಿರ್ಮಿಸುವ ಯೋಜನೆ ಸರ್ಕಾರ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣವೇನು;	• ಬೀದರ್ ಜಿಲ್ಲೆಯಲ್ಲಿ ಸಾಂಸ್ಕೃತಿಕ ಕಲಾಭವನಗಳನ್ನು ನಿರ್ಮಿಸುವ ಯೋಜನೆ ಇರುವುದಿಲ್ಲ. • ಬೀದರ್ ಜಿಲ್ಲೆಯಲ್ಲಿ ಸಾಂಸ್ಕೃತಿಕ / ಬಯಲು ರಂಗಮಂದಿರಗಳನ್ನು ನಿರ್ಮಿಸುವ ಯೋಜನೆ ಇರುತ್ತದೆ.
2.	ಜಿಲ್ಲೆಯಲ್ಲಿ ಎಷ್ಟು ಸಾಂಸ್ಕೃತಿಕ ಕಲಾ ಭವನಗಳಿವೆ ; (ತಾಲ್ಲೂಕುವಾರು ಮಾಹಿತಿ ನೀಡುವದು)	• ಬೀದರ್ ಜಿಲ್ಲೆಯಲ್ಲಿ ಸಾಂಸ್ಕೃತಿಕ ಕಲಾ ಭವನಗಳು ಇರುವುದಿಲ್ಲ. • ಬೀದರ್ ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಹಾಗೂ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 03 ಸಾಂಸ್ಕೃತಿಕ ಭವನಗಳಿವೆ. • ಭಾಲ್ಕಿ ತಾಲ್ಲೂಕು ಕೇಂದ್ರದಲ್ಲಿ- 02- ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕು ಕೇಂದ್ರದಲ್ಲಿ ಬಯಲು ರಂಗಮಂದಿರ ಹಾಗೂ ಚನ್ನಬಸವೇಶ್ವರ ಗುರುಕುಲ ಸಮುಚ್ಛಯ ಆವರಣದಲ್ಲಿ ಸಾಂಸ್ಕೃತಿಕ ಭವನ. • ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಕಮಲನಗರದಲ್ಲಿ 01 ಚನ್ನಬಸವ ಪಟ್ಟದೇವರ ಹೆಸರಿನಲ್ಲಿ ಸಾಂಸ್ಕೃತಿಕ ಭವನ.
3.	ತಾಲ್ಲೂಕು ಮಟ್ಟದಲ್ಲಿ ಕಲಾಭವನಗಳು ಇಲ್ಲದಿದ್ದರೆ ಯಾವಾಗ ನಿರ್ಮಿಸಲಾಗುವುದು?	ಪ್ರಶ್ನೆ ಉದ್ಭವಿಸುವುದಿಲ್ಲ.

ಕಡತ ಸಂಖ್ಯೆ: ಕಸಂವಾ 27 ಕವಿಸ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು